[redacted]



# ಮತದಾನ ಪ್ರಮಾಣ ಹೆಚ್ಚಳಕ್ಕೆ ಜಾಗೃತಿ ಅಗತ್ಯ

ಗದಗ ಏಪ್ರಿಲ್ 20: ಮತದಾನ ಪ್ರಮಾಣ ಹೆಚ್ಚಳಕ್ಕೆ ಗ್ರಾಮದ ಜನರಲ್ಲಿ ಜಾಗೃತಿ ಮೂಡಿಸುವುದು ತುಂಬಾ ಅವಶ್ಯಕ ಎಂದು ತಾಲೂಕ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ ಹೇಳಿದರು.

ಗದಗ ತಾಲೂಕು ವ್ಯಾಪ್ತಿಯಲ್ಲಿ ಕಳೆದ ಸಾರ್ವತಿಕ ಚುನಾವಣೆಯಲ್ಲಿ ಅತೀ ಕಡಿಮೆ ಪ್ರಮಾಣದಲ್ಲಿ ಮತದಾನವಾದ ಕೇಂದ್ರಗಳಾದ ಕಳಸಾಪೂರ ಹಾಗೂ ನಾಗಾವಿ ಗ್ರಾಮಗಳಲ್ಲಿ ಶನಿವಾರದಂದು ವಾಕ್‌ಥಾನ್ ಹಾಗೂ ಮನೆ-ಮನೆ ಭೇಟಿ ನ್ಯಾಯ ಬೆಲೆ ಅಂಗಡಿ ಭೇಟಿ ಕಾರ್ಯಕ್ರಮದ ನಿಮಿತ್ತ ಮಾತನಾಡಿದರು.




ಮೇ.7 ರಂದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು. ಜತೆಗೆ ಮನೆಯ ಪಕ್ಕದವರಿಗೆ ಮತ್ತು ವಲಸೆ ಹೋದವರಿಗೂ ಜಾಗೃತಿ ಮೂಡಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಗದಗ ಜಿಲ್ಲಾ ಹಾಗೂ ಗದಗ ತಾಲ್ಲೂಕು ಸ್ವೀಪ್ ಸಮಿತಿ ಸಹಭಾಗಿತ್ವದಲ್ಲಿ ಗದಗ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯ್ತಿಗಳ ವ್ಯಾಪ್ತಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಕಡ್ಡಾಯವಾಗಿ ಮತದಾನ ಮಾಡಿ, ಮತದಾನಕ್ಕೆ ಸಂಬಂಧಿಸಿದಂತೆ ಬೂತ್ ಲೆವೆಲ್ ಅಧಿಕಾರಿಗಳು ಪ್ರತಿ ಮನೆಗೆ ಭೇಟಿ ನೀಡಿ ಸ್ಟಿಕ್ಕರ್ ಅಂಟಿಸಿ, ವೋಟರ್ ಮಾರ್ಗಸೂಚಿಗಳನ್ನು ನೀಡುತ್ತಿದ್ದಾರೆ. ಅವುಗಳನ್ನು ಓದಿಕೊಂಡು ಯಾವುದೇ ಗೊಂದಲಗಳಿಲ್ಲದೇ ಯಾವುದಾದರೊಂದು ಅಧಿಕೃತ ಗುರುತಿನ ಕಾರ್ಡ್ ತೋರಿಸಿ ಮತದಾನ ಮಾಡಬೇಕೆಂದರು.

ಸಹಾಯಕ ನಿರ್ದೇಶಕರಾದ ಕುಮಾರ ಪೂಜಾರ ಮಾತನಾಡಿ ಗ್ರಾಮದಲ್ಲಿ ವಲಸೆ ಹೋದ ಮತದಾರರಿಗೆ ಮುಂಚಿತವಾಗಿ ತಿಳಿಸಿ ಅವರನ್ನು ಮತದಾನ ದಿನದಂದು ಗ್ರಾಮಕ್ಕೆ ಬಂದು ಮತ ಚಲಾಯಿಸಲು ತಿಳಿಸಬೇಕು ಎಂದರು. ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೆ ಧೈರ್ಯದಿಂದ ಮತದಾನದ ಹಕ್ಕು ಚಲಾಯಿಸಬೇಕು. ಹೆಚ್ಚೆಚ್ಚು ಮತದಾನ ಆಗುವಂತೆ ಪ್ರತಿಯೊಬ್ಬರಲ್ಲೂ ಜಾಗೃತಿ ಮೂಡಿಸಬೇಕು ಎಂದರು. ಈ ವೇಳೆ ಪಂಚಾಯತ ಅಭಿವೃದ್ಧಿ ಅಧಿಕಾರಿ, ಪಂಚಾಯತ ಸಿಬ್ಬಂದಿಗಳು, ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತರುಗಳು ಹಾಗೂ ವಿವಿಧ ಇಲಾಖೆ ಸಿಬ್ಬಂದಿ ಹಾಜರಿದ್ದರು.

# ಚೈತ್ರ ಸಂಸ್ಕೃತ ಉದ್ಘಾಟನೆ




ಗದಗ : ಇತ್ತೀಚೆಗೆ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ವತಿಯಿಂದ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಚೈತ್ರ ಸಂಸ್ಕೃತ ಬಾಲಕೇಂದ್ರದ ಉದ್ಘಾಟನೆ ಜರುಗಿತು.

ಆಶ್ರಮದ ಗುರುಗಳಾದ ಶ್ರೀ ಶಂಕ್ರಪ್ಪ ಸರ್ ನಿವೃತ್ತ ಮುಖ್ಯಾಧ್ಯಾಪಕರು ಮಾತನಾಡಿ, ಸಂಸ್ಕೃತ ನಮ್ಮ ದೇಶದ ಮೂಲಭಾಷೆ. ನೀವು ಪೂಜಾ ಸಮಯದಲ್ಲಿ ಹೇಳುವ ಎಲ್ಲ ಶ್ಲೋಕ ಸಂಸ್ಕೃತದಲ್ಲಿವೆ. ಗುರುಬ್ರಹ್ಮಾ ಗುರುವಿಷ್ಣು– ಮೊದಲಾದವುಗಳನ್ನು ನಾವು ಹೇಳುತ್ತೇವೆ. ನಮ್ಮ ರಕ್ತದ ಕಣಕಣದಲ್ಲಿ ಸಂಸ್ಕೃತ ಬೆರೆತುಕೊಂಡಿದೆ. ಆದರೆ ಅದು ಸಂಸ್ಕೃತ ಎಂಬ ತಿಳುವಳಿಕೆ ನಮಗಿಲ್ಲ. ಕಾರಣ ಬಿ.ಜಿ. ಅಣ್ಣಿಗೇರಿ ಗುರುಗಳು ಆಧ್ಯಾತ್ಮ ಮತ್ತು ಸಂಸ್ಕೃತಕ್ಕೆ ತುಂಬಾ ಪ್ರೋತ್ಸಾಹ ಕೊಡುತ್ತಿದ್ದರು. ಎಲ್ಲ ಮಕ್ಕಳು ಚೆನ್ನಾಗಿ ಸಂಸ್ಕೃತ ಕಲಿತು ಸಂಸ್ಕಾರವಂತಾಗಿರಿ ಎಂದು ನುಡಿದರು.

ಬಿ.ಜಿ.ಎ. ಪ್ರತಿಷ್ಠಾನದ ಅಧ್ಯಕ್ಷರಾದ ಶ್ರೀ ಶಿವಕುಮಾರ ಎಚ್. ಪಾಟೀಲ, ಪ್ರತಿಷ್ಠಾನದ ಕಾರ್ಯದರ್ಶಿ ಶ್ರೀ ಶಿವಾನಂದ ಕಟ್ಟಿ, ಚೈತ್ರ ಸಂಸ್ಕೃತ ಸಂಚಾಲಕಿ ಶ್ರೀಮತಿ ಶೈಲಜಾ ಕುಲಕರ್ಣಿ, ಸಂಸ್ಕೃತಿ ಭಾರತೀ ಕಾರ್ಯಕರ್ತರಾದ ಶ್ರೀ ಗಣೇಶ ಸವಣೂರ, ಆಶ್ರಮದ ಟ್ರಸ್ಟಿ ಶ್ರೀ ಕಳಕಪ್ಪ ಸರ್, ಸಂಸ್ಕೃತ ಶಿಕ್ಷಕರಾದ ಶ್ರೀ ಮಹಾಂತೇಶ ಮಾದರ ಮುಂತಾದವರು ಉಪಸ್ಥಿತರಿದ್ದರು.

ಶ್ರೀ ಜ. ತೋಂ. ಸಂಸ್ಕೃತ ಪಾಠಶಾಲೆಯ ಮುಖ್ಯಾಧ್ಯಾಪಕರದ ಎಸ್. ಎನ್. ಶಿಂಪಿಗೇರ ಸ್ವಾಗತ, ಪರಿಚಯ ಮಾಡಿದರು. ಶ್ರೀ ಮಹಾಂತೇಶ ಮಾದರ ವಂದಿಸಿದರು.

# ಎಡೆಯೂರು ಶ್ರೀ ತೋಂಟದ ಸಿದಲಿಂಗ ಶಿವಯೋಗಿಗೆಳ ಕುರಿತು ಉಪನ್ಯಾಸ

ಗದಗ–20 : ಪ್ರತಿವಾರದಂತೆ ದಿನಾಂಕ 21–04–2024 ರವಿವಾರ ಬೆಳಿಗ್ಗೆ 11–00 ಕ್ಕೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನಡೆಯಲಿರುವ ಬಸವದಳದ 1590 ನೇ ಶರಣ ಸಂಗಮದಲ್ಲಿ ಎಡೆಯೂರು ಶ್ರೀ ತೋಂಟದ ಸಿದ್ಧಲಿಂಗ ಶಿವಯೋಗಿಗಳ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಶರಣ ಎಸ್. ಎನ್. ಹಕಾರಿ, ಹಿರಿಯರು ಬಸವದಳ ಗದಗ ಇವರು ವಹಿಸುವರು. ಶರಣೆ ನೀಲಲೋಚನಾ ಸಿ. ಹಂಚಿನಾಳ, ನಿವೃತ್ತ ಶಿಕ್ಷಕಿಯರು, ಗದಗ ಇವರು ಉಪನ್ಯಾಸ ಮಾಡುವರು.

ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

# ಲೋಕಸಭಾ ಚುನಾವಣೆ ಸಂಬಂಧ ಅಧಿಕಾರಿಗಳ ಜತೆ ಜಿಲ್ಲಾಧಿಕಾರಿ ಸುಧೀರ್ಘ ಚರ್ಚೆ

ಗದಗ ಏಪ್ರಿಲ್ 20: ಲೋಕಸಭಾ ಚುನಾವಣೆ ಸಿದ್ಧತೆ ಸಂಬಂಧಿಸಿದಂತೆ ನೋಡಲ್ ಅಧಿಕಾರಿಗಳು. ಸಹಾಯಕ ಚುನಾವಣಾಧಿಕಾರಿಗಳು ಹಾಗೂ ತಹಶೀಲ್ದಾರರ ಜೊತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಶನಿವಾರ ಸಭೆ ನಡೆಸಿದರು.



ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅಂಚೆ ಮತಪತ್ರ, ಅಗತ್ಯ ಸೇವೆಗಳಡಿ ಅಂಚೆ ಮತದಾನ, ಮತಗಟ್ಟೆಗೆ ತೆರಳಲು ಆಗದಿರುವ ಹಾಗೂ ಈಗಾಗಲೇ ಒಪ್ಪಿಗೆ ನೀಡಿರುವ 85 ವರ್ಷ ಮೇಲ್ಪಟ್ಟ ಹಾಗೂ ವಿಕಲಚೇತನರಿಂದ 'ಮನೆ ಮತದಾನ' ಮಾಡಿಸುವ ಕಾರ್ಯ, ಮತದಾರರ ಮಾಹಿತಿ ಚೀಟಿ ಹಂಚಿಕೆ ಹೀಗೆ ಚುನಾವಣೆ ಸಂಬಂಧ ಹಲವು ವಿಷಯಗಳ ಕುರಿತು ಜಿಲ್ಲಾಧಿಕಾರಿ ಅವರು ಸುಧೀರ್ಘ ಚರ್ಚೆ ನಡೆಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ ಕರ್ತವ್ಯ ನಿರ್ವಹಿಸಬೇಕು. ಚುನಾವಣೆಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ನಡೆಯುವ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಚುನಾವಣೆಯನ್ನು ಅಚ್ಚುಕಟ್ಟಾಗಿ ನಡೆಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅವರು ಸೂಚಿಸಿದರು.

ಜಿ.ಪಂ.ಸಿಇಒ ಎಸ್ ಭರತ್ ಅವರು ಮಾತನಾಡಿ ಚುನಾವಣಾ ಕರ್ತವ್ಯವನ್ನು ಪರಿಣಾಮಕಾರಿಯಾಗಿ ನಿರ್ವಹಿಸಬೇಕು. ಮತದಾನ ಹೆಚ್ಚಳಕ್ಕೆ ಪ್ರೋತ್ಸಾಹಿಸಬೇಕು. ಚುನಾವಣೆಗೆ ನಿಯೋಜಿಸಿರುವ ಅಧಿಕಾರಿಗಳು ತಂಡವಾಗಿ ಕಾರ್ಯ ನಿರ್ವಹಿಸಬೇಕು. ಮಹಿಳೆಯರು ಸೇರಿದಂತೆ ಅರ್ಹರೆಲ್ಲರೂ ಮತದಾನದ ದಿನದಂದು ಮತಗಟ್ಟೆಗೆ ತೆರಳಿ ಮತ ಚಲಾಯಿಸುವಂತಾಗಲು ಹೆಚ್ಚಿನ ಜಾಗೃತಿ ಮೂಡಿಸುವಂತೆ ಜಿ.ಪಂ.ಸಿಇಒ ಸಲಹೆ ಮಾಡಿದರು. ಇದೇ ಏಪ್ರಿಲ್ 22 ರಂದು ಸಂಜೆ 5 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಮತದಾನದ ಮಹತ್ವ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸುವ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಹಾಗೆಯೇ ಮತದಾನದ ಮಹತ್ವ ಕುರಿತು ಇದೇ ಏಪ್ರಿಲ್ 28 ರಂದು 'ನಮ್ಮ ನಡೆ ಮತಗಟ್ಟೆ ಕಡೆಗೆ' ಜಾಗೃತಿ ಅಭಿಯಾನ ನಡೆಯಲಿದ್ದು ಮತಗಟ್ಟೆವಾರು ಕಾರ್ಯಕ್ರಮಗಳನ್ನು ಆಯೋಜಿಸಿ ಮತದಾನ ಮಹತ್ವ ಕುರಿತು ಅರಿವು ಮೂಡಿಸುವಂತೆ ಇದೇ ಸಂದರ್ಭದಲ್ಲಿ ಜಿ.ಪಂ.ಸಿಇಒ ಸಲಹೆ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಸುರೇಖಾ ಅವರು ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಬೇಕು. ಸಮಸ್ಯೆಗಳಿದ್ದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಸಲಹೆ ಮಾಡಿದರು.

ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ ಅವರು ಚುನಾವಣೆ ಸಂಬಂಧ ಹಲವು ಮಾಹಿತಿ ನೀಡಿದರು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ತಹಶೀಲ್ದಾರರಾದ ಶ್ರೀನಿವಾಸ ಕುಲಕರ್ಣಿ ಇತರರು ಇದ್ದರು.

# ಮತದಾನ ಸಾಂವಿಧಾನಿಕ ಹಕ್ಕು ಅದನ್ನು ಚಲಾಯಿಸಿ




ಗದಗ: ಕೆ.ಎಲ್.ಇ ಸೊಸೈಟಿಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಗದಗ SVEEP ಮತ್ತು NSS ಘಟಕವು ರೋಟರಿ ಕ್ಲಬ್ ಗದಗ ಬೆಟಗೇರಿ ಸಹಯೋಗದಲ್ಲಿ ಮತದಾನದ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಈ ಜಾಗೃತಿ ಕಾರ್ಯಕ್ರಮದ ಮುಖ್ಯ ಉದ್ದೇಶಗಳು ಮತದಾರರ ನೋಂದಣಿಯನ್ನು ಹೆಚ್ಚಿಸುವುದು ಮತ್ತು ಪ್ರಜಾಪ್ರಭುತ್ವವನ್ನು ಹೆಚ್ಚು ಶಕ್ತಿಯುತಗೊಳಿಸಲು ಮತದಾನ ಮಾಡುವುದು. ಗದಗ ಶಹರ ಬಿಇಒ ಶ್ರೀ ಆರ್.ಎಸ್.ಬುರಡಿ ಮಾತನಾಡಿ ಭಾರತದಲ್ಲಿ ಪ್ರಜಾಪ್ರಭುತ್ವದ ಬುನಾದಿ ಮತದಾನ. ಭಾರತದಲ್ಲಿ, ಪ್ರತಿಯೊಬ್ಬ ನಾಗರಿಕನಿಗೂ ಅದರಲ್ಲಿ ಭಾಗವಹಿಸುವ ಹಕ್ಕು ಮತ್ತು ಜವಾಬ್ದಾರಿ ಇದೆ. ಮತದಾನವು ಪ್ರಜಾಪ್ರಭುತ್ವದ ಮೂಲಾಧಾರವಾಗಿದೆ ಮತ್ತು ಭಾರತದ ರಾಜಕೀಯ ಭೂದೃಶ್ಯವನ್ನು ರೂಪಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ರೊ. ಶ್ರೀಧರ್ ಸುಲ್ತಾನಪೂರ್ ಮಾತನಾಡಿ, ಮತದಾನವು ನಾಗರಿಕರು ತಮ್ಮ ಪ್ರತಿನಿಧಿಗಳನ್ನು ಆಯ್ಕೆ ಮಾಡುವ ಹಕ್ಕನ್ನು ಚಲಾಯಿಸಲು ಮತ್ತು ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅನುವು ಮಾಡಿಕೊಡುತ್ತದೆ.

ಪಾರದರ್ಶಕ ಪ್ರಜಾಪ್ರಭುತ್ವ ರಾಷ್ಟ್ರವನ್ನು ರಚಿಸಲು ಹೆಚ್ಚಿನ ಯುವ ಮತದಾರರು ಚುನಾವಣಾ ಪ್ರಕ್ರಿಯೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಪ್ರೋತ್ಸಾಹಿಸಲು ಮಹತ್ವದೊಂದಿಗೆ ಸಾಮಾನ್ಯ ಜನರಲ್ಲಿ ಜಾಗೃತಿ ಮೂಡಿಸಲು ಡಾ.ಎ.ಕೆ.ಮಠ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಉಪ ಪ್ರಾಂಶುಪಾಲೆ ಡಾ.ವೀಣಾ ಇ, ಡಾ. ವಿಠಲ್ ಕೋಲಿ, ಆರ್‌ಸಿಜಿಬಿ ಅಧ್ಯಕ್ಷ ಆರ್.ಟಿ.ಎನ್. ಚಂದ್ರಮೌಳಿ ಜಾಲಿ, ರೊ. ಎಸ್.ಎಸ್.ಹೊಸಳ್ಳಿಮಠ, ಅಕ್ಷಯ್ ಶೆಟ್ಟಿ, ಆರ್‌ಸಿಜಿಬಿ ಕಾರ್ಯದರ್ಶಿಗಳಾದ ವೀಣಾ ತಿರ್ಲಾಪೂರ ಹಾಗೂ ಕಾಲೇಜಿನ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ನೇಹಾ ಹತ್ಯೆಯನ್ನು ಖಂಡಿಸಿ ಎಬಿವಿಪಿಯಿಂದ ಮೂಡಲಗಿಯಲ್ಲಿ ಪ್ರತಿಭಟನೆ

ಮೂಡಲಗಿ: ಹುಬ್ಬಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಹತ್ಯೆಯ ಘಟನೆಯಿಂದ ರಾಜ್ಯದ ವಿದ್ಯಾರ್ಥಿ ಸಮುದಾಯ ಭಯಭೀತಗೊಂಡಿದ್ದು, ಪೊಲೀಸರು ಕೂಡಲೇ ಸೂಕ್ತ ತನಿಖೆಯನ್ನು ಕೈಗೊಂಡು, ಅಪರಾಧಿಗೆ ಉಗ್ರ ಶಿಕ್ಷೆ ಆಗುವ



ಹಾಗೆ ಮಾಡಿ ವಿದ್ಯಾರ್ಥಿನಿಯ ಕುಂಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಎಬಿವಿಪಿಯ ರಾಷ್ಟ್ರೀಯ ಕಾರ್ಯಕಾರ್ಯನಿ ಸದಸ್ಯ ಮಲ್ಲಿಕಾರ್ಜುನ ಮುಕುಂದ ಆಗ್ರಹಿಸಿದರು.

ಶನಿವಾರದಂದು ಪಟ್ಟಣದಲ್ಲಿ ಹುಬ್ಬಳ್ಳಿಯ ವಿದ್ಯಾರ್ಥಿನಿ ನೇಹಾ ಹಿರೇಮಠ ಲವ್ ಜಿಹಾದಿಯ ಕಾರಣಕ್ಕಾಗಿ ಹತ್ಯೆ ಮಾಡಿದನ್ನು ಖಂಡಿಸಿ, ಎಬಿವಿಪಿ ಪ್ರತಿಭಟನೆಗೆ ಕರೆ ನೀಡಿದ ಹಿನ್ನಲೆ ಸ್ಥಳೀಯ ಕಾಲೇಜು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಭಾಗಿಯಾಗಿ ಪಟ್ಟಣದ ಕಲ್ಮೇಶ್ವರ ವೃತ್ತದಲ್ಲಿ ರಸ್ತೆ ತಡೆದು ಪ್ರತಿಭಟಿಸಿ ತಹಶೀಲ್ದಾರ ಮೂಲಕ ಸರಕಾರಕ್ಕೆ ಮನವಿ ಅರ್ಪಿಸಿ ಮಾತನಾಡಿ ಕಾನೂನಿನ ಯಾವುದೇ ಭಯವೂ ಇಲ್ಲದೆ ರಾಜಾರೋಳವಾಗಿ ಹಾಡು ಹಗಲೇ ಕ್ರತ್ಯ ಮಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದರೆ ನಮ್ಮ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಳ್ಳು ಕುಸಿದು ಹೋಗಿದೆ ಎನ್ನುವುದು ಸ್ಪಷ್ಟವಾಗಿ ತಿಳಿಯುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿದ್ಯಾರ್ಥಿನಿ ಶಿಲ್ಪಾ ನಂದಗಾವಮಠ ಮಾತನಾಡಿ, ಕಾಲೇಜಿಗೆ ಶಿಕ್ಷಣ ಕಲಿಯಲು ಬರುವ ಬಡ ವಿದ್ಯಾರ್ಥಿನಿಯರಿಗೆ ಇಂತಹ ಘಟನೆನಿಂದ ಮತ್ತಷ್ಟು ಭಯ ಕಾಡುತ್ತಿದೆ. ಮೊದಲೇ ಬಡತನದಲ್ಲಿ ಜೀವನ ಸಾಗಿಸುತ್ತಿರುವ ನಮ್ಮ ಪಾಲಕರು ಶಿಕ್ಷಣ ಕಲಿಸಲು ಸಾಕಷ್ಟು ಕಷ್ಟುಪಟ್ಟು ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುತ್ತಿರು ಪರಿಸ್ಥಿತಿಯಲ್ಲಿ ವಿದ್ಯಾರ್ಥಿನಿಯ ಮೇಲೆ ಆಗುತ್ತಿರುವ ಇಂತಹ ಘಟನೆಗಳಿಂದ ಕಾಲೇಜಿಗೆ ಕಳುಹಿಸಲು ಗ್ರಾಮೀಣ ಭಾಗಳಲ್ಲಿ ಹಿಂದೇಟು ಹಾಕುವಂತ ಪರಿಸ್ಥಿತಿ ಉದ್ಭವಿಸಬಹುದು. ಮೊದಲೇ ಬಡತನದಲ್ಲಿ ಜೀವನ ಸಾಗಿಸುತ್ತಿರುವ ನಮ್ಮ ಪಾಲಕರು ಶಿಕ್ಷಣ ಕಲಿಸಲು ಸಾಕಷ್ಟು ಕಷ್ಟುಪಟ್ಟು ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುತ್ತಿರು ಪರಿಸ್ಥಿತಿಯಲ್ಲಿ ವಿದ್ಯಾರ್ಥಿನಿಯ ಮೇಲೆ ಆಗುತ್ತಿರುವ ಇಂತಹ ಘಟನೆಗಳಿಂದ ಕಾಲೇಜಿಗೆ ಕಳುಹಿಸಲು ಗ್ರಾಮೀಣ ಭಾಗಳಲ್ಲಿ ಹಿಂದೇಟು ಹಾಕುವಂತ ಪರಿಸ್ಥಿತಿ ಉದ್ಭವಿಸಬಹುದು. ನೇಹಾ ಹತ್ಯೆ ಮಾಡಿದ ಯುವಕನಿಗೆ ಗಲ್ಲು ಶಿಕ್ಷೆ ವಿಧಿಸಿ, ಹೆಣ್ಣುಮಕ್ಕಳಿಗೆ ಸರ್ಕಾರ ರಕ್ಷಣೆ ನೀಡಬೇಕೆಂದು ಆಗ್ರಹಿಸಿದರು.

ಎಬಿವಿಪಿ ಕಾರ್ಯಕರ್ತರು ಪ್ರತಿಭಟನೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಬಿವಿಪಿಯ ಬಸವರಾಜ ಜೋಡಟ್ಟಿ, ಮಹಾದೇವ ನವನಿ, ಶಿವಾನಂದ ಸರಪನಿ, ಕಿರಣ ಲಿಂಗನೂರ, ಪ್ರಜ್ವಲ್ ಸೇಬನ್ನವರ, ಪ್ರವೀಣ ಮಗದುಮ್ಮ, ಶಂಕರ ಸತ್ತಿಗೇರಿ, ಸಚೀನ ತಳವಾರ, ಪ್ರಶಾಂತ ಕ್ಷತ್ರಿ, ಸುಪ್ರಿಯಾ ಸೇರೆಗಾರ, ಪಾರ್ವತಿ ಡಬನ್ನವರ, ಅಕ್ಷತಾ ತೇಲಿ, ಸಕ್ಕು ಹಳ್ಳೂರ, ಶಿಲ್ಪಾ ಹೊಸುರ, ಸ್ಪಂದನಾ ಹಳಸಿ ಹಾಗೂ ಅನೇಕ ಎಬಿವಿಪಿಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಂದು ನಂದಿ ಸೊಸಾಯಿಟಿ ಶಾಖೆ ಉದ್ಘಾಟನೆ

ಮೂಡಲಗಿ: ಪಟ್ಟಣದ ಶ್ರೀ ನಂದಿ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸಾಯಿಟಿಯ ಪ್ರಥಮ ಶಾಖೆಯ ಉದ್ಘಾಟನಾ ಸಮಾರಂಭ ಮೂಡಲಗಿ ತಾಲೂಕಿನ ಯಾದವಾಡ ಗ್ರಾಮದಲ್ಲಿ ರವಿವಾರ ದಿ.21 ರಂದು ಮುಂಜಾನೆ 8=35ಕ್ಕೆ ಶ್ರೀ ಮಹಾಲಕ್ಷ್ಮೀ ಹಾಗೂ ಮಹಾಸರಸ್ವತಿ ಪೂಜೆಯೊಂದಿಗೆ ಜರುಗಲಿದೆ ಎಂದು ಸೊಸಾಯಿಟಿಯ ಪ್ರಧಾನ ಕಾರ್ಯದರ್ಶಿ ಶಿವರಾಜ ರಂಜನಗಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

ಸಮಾರಂಭದ ಸಾನ್ನಿಧ್ಯವನ್ನು ಮೂಡಲಗಿ ಶ್ರೀ ಶಿವಬೋಧರಂಗ ಮಠದ ಪೀಠಾಧಿಪತಿ ಶ್ರೀ ದತ್ತಾತ್ರೇಯಬೋಧ ಸ್ವಾಮೀಜಿ, ಯಾದವಾಡ ಶ್ರೀ ಶಿವಲಿಂಗಪ್ಪಜ್ಜ ಹುಬ್ಬಳ್ಳಿ, ಚೌಕಿ ಮಠದ ಶ್ರೀ ಶಿವಯೋಗಿ ದೇವರು, ಸುಣಧೋಳಿ ಜಡಿಸಿದ್ಧೇಶ್ವರ ಮಠದ ಪೀಠಾಧಿಪತಿ ಶ್ರೀ ಶಿವಾನಂದ ಸ್ವಾಮೀಜಿಗಳು ವಹಿಸುವರು. ಶಾಸಕ ಬಾಲಚಂದ್ರ ಜಾರಕಿಹೊಳಿ ಉದ್ಘಾಟಿಸುವರು, ಸೊಸಾಯಿಟಿಯ ಅಧ್ಯಕ್ಷ ಬಸಪ್ಪಾ ಸಿ.ಬಳಿಗಾರ ಅಧ್ಯಕ್ಷತೆ ವಹಿಸುವರು ಹಾಗೂ ಅತಿಥಿಗಳಾಗಿ ಅನೇಕರು ಭಾಗವಹಿಸುವರು.

# ನಿಯಂತ್ರಣ ಘಟಕಕ್ಕೆ ಭೇಟಿ ನೀಡಿದ ಚುನಾವಣಾ ಸಾಮಾನ್ಯ ವೀಕ್ಷಕರು

ಬೆಳಗಾವಿ.ಏ.–ನಿಯೋಜಿಸಿರುವ ಸಾಮಾನ್ಯ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನಿಯಂತ್ರಣ ಘಟಕಕ್ಕೆ ಶನಿವಾರ (ಏ.20) ರಂದು ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ನಿಯಂತ್ರಣ ಘಟಕದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಅತೀ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು.

ಚೆಕ್ ಪೋಸ್ಟಗಳ ಮೇಲೆ ನಿರಂತರವಾಗಿ ನಿಗಾವಹಿಸಬೇಕು. ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳ ಮೇಲೆ ನಿರಂತರವಾಗಿ ನಿಗಾವಹಿಸುವದರ ಜೊತೆಗೆ ಚುನಾವಣೆಗೆ ಸಂಬಂಧಿಸಿದ ದೂರು, ಮಾದರಿ ನೀತಿ ಸಂಹಿತೆ ಉಲ್ಲಂಘನೆಯಂತಹ ಪ್ರಕರಣಗಳು ಕಂಡು ಬಂದಲ್ಲಿ ಕೂಡಲೇ ಕ್ರಮ ವಹಿಸುವಂತೆ ಸೂಚಿಸಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ನಿಯಂತ್ರಣ ಘಟಕದಲ್ಲಿನ ಕಾರ್ಯನಿರ್ವಹಿಸುತ್ತಿರುವ ಚೆಕ್ ಪೋಸ್ಟಗಳ ನಿಯಂತ್ರಣ, ಮಾಧ್ಯಮ ಕಣ್ಗಾವಲು ಘಟಕದ ಕಾರ್ಯ ವೈಖರಿಯ ಬಗ್ಗೆ ವೀಕ್ಷಕರಾದ ಜಿ.ಎಸ್.ಪಾಂಡಾ ದಾಸ್ ಅವರಿಗೆ ವಿವರಿಸಿದರು.

# ದೇಹದಾನ ಜಾಗೃತಿ ಕಾರ್ಯಕ್ರಮ ಉದ್ಘಾಟನೆ

ಬೆಳಗಾವಿ: ಆಧುನಿಕತೆಯುಂ ಝಲ್ಲಿಯೂ ಕೂಡ ಮೂಢನಂಬಿಕೆಯಿಂದಾಗಿ ದೇಹದಾನ ಮತ್ತು ಅಂಗಾಂಗ ದಾನ ಮಾಡಲು ಜನರು ಹಿಂದೇಟು ಹಾಕುತ್ತಿದ್ದಾರೆ. ಸಮಾಜದಲ್ಲಿ ಯಾವುದಾದರೂ ಒಂದು ಒಳ್ಳೆಯ ಕೆಲಸಕ್ಕೆ ಪರ ಮತ್ತು ವಿರೋಧ ಇದ್ದೆ ಇರುತ್ತದೆ. ಶರೀರವು ನಶ್ವರವಾಗಿದ್ದು, ಇದನ್ನು ಮಣ್ಣು ಮಾಡಿ ಕೊಳೆಸುವದಕ್ಕಿಂತ



ದೇಹದಾನ ಮಾಡಿ ವೈದ್ಯವಿದ್ಯಾರ್ಥಿಗಳಿಗೆ ಕಲಿಯಲು ಸಹಕರಿಸಬೇಕು ಮತ್ತು ಸಮಾಜಕ್ಕೆ ಮಾದರಿಯಾಗಬೇಕು ಎಂದು ಕಾರಂಜಿ ಮಠದ ಶ್ರೀ ಗುರುಸಿದ್ದ ಸ್ವಾಮಿಗಳು ಸಲಹೆ ನೀಡಿದರು.

ಕಾಹೇರನ ಜೆಎನ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಏರ್ಪಡಿಸಿದ್ದ ದೇಹದಾನ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದ ಅವರು, ನಾನೂ ದೇಹದಾನ ಮಾಡಬೇಕೆಂಬ ಮನೋಭಾವನೆ ಇರಬೇಕು. ಸಮಾಜಕ್ಕೆ ಮಾರ್ಗದರ್ಶನ ನೀಡುವ ಸ್ವಾಮಿಜಿಯಾಗಿ ನಾನೂ ಕೂಡ ಜನುಮ ದಿನದಂದೇ ದೇಹದಾನ ಮಾಡುವ ನಿರ್ಧಾರ ತೆಗೆದುಕೊಂಡಾಗ ಹಲವರು ಹೊಗಳಿದರೆ ಕೆಲವರು ತೆಗಳಿದರು. ಆದರೆ ಸಮಾಜಕ್ಕೆ ಇದರಿಂದ ಒಳ್ಳೆಯದಾಗುತ್ತದೆ ಎಂಬ ಸಂದೇಶ ನೀಡಿಯಾಗಿದೆ. ಆದ್ದರಿಂದ ಕುಟುಂಬದೊಂದಿಗೆ ಚರ್ಚಿಸಿ ದೇಹದಾನ ಅಥವಾ ಅಂಗಾಂಗ ದಾನ ಮಾಡುವ ನಿರ್ಧಾರ ಕೈಗೊಳ್ಳಿ ಎಂದರು.

ಜೆಎನ್‌ಎಂಸಿ ಉಪಪ್ರಾಚಾರ್ಯರಾದ ಡಾ. ವಿಶ್ವನಾಥ ಪಟ್ಟಣಶೆಟ್ಟಿ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾನವ ಅಂಗಾಂಗಗಳ ವೈಫಲ್ಯ ತೀವ್ರಗತಿಯಲ್ಲಿ ಕಂಡುಬರುತ್ತಿದೆ. ಅವರ ಜೀವನ ದುಸ್ತರವಾಗುತ್ತಿದ್ದು, ಅರ್ಥಿಕವಾಗಿಯೂ ದುರ್ಬಲರಾಗುತ್ತಿದ್ದಾರೆ. ಕಿಡ್ನಿ ದಾನ ಮಾಡಿದಂತೆ ಹೃದಯ, ಲಂಗ, ಲೀವರ, ಪಾನಕ್ರಿಯಾ ಸೇರಿದಂತೆ ವಿವಿಧ ಅಂಗಗಳನ್ನು ದಾನ ಮಾಡಬೇಕು. ಅಪಘಾತದಲ್ಲಿ ಗಾಯಗೊಂಡು ಮೆದುಳು ನಿಷ್ಕ್ರೀಯಗೊಂಡು ಜೀವಂತ ಶವವಾಗಿರುವ ವ್ಯಕ್ತಿಯ ಅಂಗಗಳನ್ನು ಬೇರೊಬ್ಬರಿಗೆ ಕಸಿ ಮಾಡಿ ಅವರ ಜೀವ ಉಳಿಸಬಹುದು. ಆತ ನೀಡುವ ಅಂಗಾಂಗಳಿಂದ 8 ಜನರ ಜೀವ ಉಳಿಸಬಹುದು ಎಂದು ವಿವರಿಸಿದರು.

ಸಮಾಜ ಸೇವಕ ವಿಜಯ ಮೋರೆ ಮಾತನಾಡಿ, ಈ ಭಾಗದಲ್ಲಿ ಅಂಗಾಂಗ ದಾನಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕಾಗಿದ್ದು, ಸರಕಾರೇತರ ಸಂಘಸಂಸ್ಥೆಗಳು ಮುಂದೆ ಬರಬೇಕಾಗಿದೆ. ಅಂಗಾಂಗಗಳ ದಾನ ಕುರಿತು ಈ ಭಾಗದಲ್ಲಿ ಅರಿವು ಕಡಿಮೆ. ಗ್ರಾಮಿಣ ಭಾಗಗಳ ಜನರಿಗೆ ಅದರ ಕುರಿತು ಜಾಗೃತೆ ಮೂಡಿಸುವದು ಅತ್ಯಂತ ಮುಖ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಡಾ. ಆರಿಫ್ ಮಾಲ್ದಾರ, ಡಾ. ರಾಮಣ್ಣವರ ಟ್ರಸ್ಟನ ಡಾ. ಮಹಾಂತೇಶ ರಾಮಣ್ಣವರ ಮಾತನಾಡಿದರು. ಡಾ. ಶೀತಲ ಪಟ್ಟಣಶೆಟ್ಟಿ ಅತಿಥಿಗಳನ್ನು ಪರಿಚಯಿಸಿ, ಸ್ವಾಗತಿಸಿದರೆ, ಡಾ.ರಚನಾ ಕುಲಕರ್ಣಿ ಹಾಗೂ ಮಹಾಂತೇಶ ಇಳಕಲ್ ನಿರೂಪಿಸಿದರು. ಡಾ. ಶಿಲ್ಪಾ ಭೀಮಳ್ಳಿ ವಂದಿಸಿದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26